# ಕರ್ನಾಟಕ ವಿಧಾನ ಪರಿಷತ್

| | |
|---|---|
| ಮಾನ್ಯ ಸದಸ್ಯರ ಹೆಸರು | :ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್)(ಶಿಕ್ಷಕರು ಕ್ಷೇತ್ರದಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | :**1034** |
| ಉತ್ತರಿಸಬೇಕಾದ ದಿನಾಂಕ | :20.08.2025 |
| ಉತ್ತರಿಸಬೇಕಾದ ಸಚಿವರು | :ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2023-24 ರಿಂದ 2025-26ರವರೆಗೆ ವಿವಿಧ ವಸತಿ ಯೋಜನೆಗಳಡಿ ಹಿಂದುಳಿದ ಅಲೆಮಾರಿ ಜನಾಂಗದವರಿಗೆ ಮಂಜೂರು ಮಾಡಲಾದ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮತ್ತು ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು) | 2023-24 ರಿಂದ 2025-26ನೇ ಸಾಲಿನಿಂದ ವಿವಿಧ ವಸತಿ ಯೋಜನೆಗಳಡಿ ಹಿಂದುಳಿದ ಅಲೆಮಾರಿ ಜನಾಂಗದವರಿಗೆ ಮನೆಗಳನ್ನು ಮಂಜೂರು ಮಾಡಿರುವುದಿಲ್ಲ. |
| ಆ) | ಮಂಜೂರಾತಿಯಾದ ಈ ಮನೆಗಳ ಪೈಕಿ ಇದುವರೆಗೂ ನಿರ್ಮಾಣ ಕಾರ್ಯ ಪೂರ್ಣಗೊಂಡ ಮನೆಗಳ ಸಂಖ್ಯೆ ಎಷ್ಟು; ಅಪೂರ್ಣ ಮನೆಗಳ ಸಂಖ್ಯೆ ಎಷ್ಟು | ಅನ್ವಯಿಸುವುದಿಲ್ಲ |
| ಇ) | ಮನೆಗಳ ನಿರ್ಮಾಣವನ್ನು ಮಾಡಲು ಪ್ರಸ್ತುತ ಇರುವ ಘಟಕ ವೆಚ್ಚದಲ್ಲಿ ಸಾಧ್ಯವಿದೆಯೇ; ಇಲ್ಲದಿದ್ದಲ್ಲಿ, ಸರ್ಕಾರವು ಘಟಕ ವೆಚ್ಚವನ್ನು ಪರಿಷ್ಕರಿಸಲು ತೆಗೆದುಕೊಂಡಿರುವ ಕ್ರಮಗಳೇನು; | ದೇವರಾಜ ಅರಸು ವಸತಿ ಯೋಜನೆಯಡಿ ಪ್ರತಿ ಮನೆಗೆ ಪರಿಶಿಷ್ಟ ಜಾತಿ/ಪಂಗಡಕ್ಕೆ ಸೇರಿದ ಫಲಾನುಭವಿಗಳಿಗೆ ರೂ.1.50ಲಕ್ಷ ಹಾಗೂ ಸಾಮಾನ್ಯ ಮತ್ತು ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಫಲಾನುಭವಿಗಳಿಗೆ ರೂ.1.20 ಲಕ್ಷಗಳ ಸಹಾಯಧನವನ್ನು ನೀಡಲಾಗುತ್ತಿದೆ. ಫಲಾನುಭವಿಗಳಿಗೆ ನೀಡಲಾಗುತ್ತಿರುವ ಸಹಾಯಧನದ ಜೊತೆಗೆ ಫಲಾನುಭವಿಗಳು ತಮ್ಮ ಸ್ವಂತ ವಂತಿಕೆಯೊಂದಿಗೆ ತಮಗೆ ಮಂಜೂರಾದ ಮನೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದಾರೆ.<br>ವಿವಿಧ ವಸತಿ ಯೋಜನೆಗಳಡಿ ಪ್ರಸ್ತುತ ನೀಡಲಾಗುತ್ತಿರುವ ಸಹಾಯಧನದ ಮೊತ್ತವನ್ನು ಹೆಚ್ಚಿಸುವ ಕುರಿತು ಪರಿಶೀಲನೆಯಲ್ಲಿರುತ್ತದೆ. |
| ಈ) | ನಿವೇಶನ ಇಲ್ಲದಿರುವ ಅಲೆಮಾರಿ ಕುಟುಂಬಗಳಿಗೆ ನಿವೇಶನವನ್ನು ನೀಡುವ ಬಗ್ಗೆ ಸರ್ಕಾರದ ಕ್ರಮಗಳೇನು? | ರಾಜೀವ್ ಗಾಂಧಿ ವಸತಿ ನಿಗಮದಿಂದ ನಿವೇಶನ ರಹಿತರಿಗೆ ನಿವೇಶನ ಕಲ್ಪಿಸಲು ಮುಖ್ಯಮಂತ್ರಿಗಳ ಗ್ರಾಮೀಣ ಮತ್ತು ನಗರ ನಿವೇಶನ ಯೋಜನೆಗಳನ್ನು ಅನುಷ್ಠಾನಗೊಳಿಸ ಲಾಗುತ್ತಿದ್ದು, ಜಿಲ್ಲೆಗಳಲ್ಲಿ ವಸತಿಗೆ ಯೋಗ್ಯ ಜಮೀನು ಲಭ್ಯವಿಲ್ಲದಿದ್ದಲ್ಲಿ ಖಾಸಗಿ ಜಮೀನನ್ನು ಖರೀದಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಜಮೀನು ಖರೀದಿ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿ ಮೂಲಕ ನಿವೇಶನಕ್ಕೆ ಯೋಗ್ಯ ಜಮೀನನ್ನು ಗುರುತಿಸಿ ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಲ್ಲಿ ಜಮೀನು ಖರೀದಿಸಲು ಅನುದಾನ ಬಿಡುಗಡೆ ಮಾಡಲಾಗುವುದು. |

ಸಂಖ್ಯೆ: ವಇ 369 ಹೆಚ್‌ಎಎಂ 2025

**(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು